**All India Radio: Bangalore**
**National Bulletin In Kannada**
**24.02.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.02.2025 07.35 a.m.**

**<><><><>**

ಮುಖ್ಯಾಂಶಗಳು

1. ಬಿಹಾರದಲ್ಲಿಂದು ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೧೯ನೇ ಕಂತನ್ನು ಬಿಡುಗಡೆಗೊಳಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಭೋಪಾಲ್‌ನಲ್ಲಿಂದು ಜಾಗತಿಕ ಹೂಡಿಕೆದಾರರ ಶೃಂಗಸಭೆಗೆ ಪ್ರಧಾನಿ ಚಾಲನೆ
3. ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ಇಂದಿನಿಂದ ನಾಲ್ಕು ದಿನಗಳ ಫ್ರಾನ್ಸ್ ಭೇಟಿ ; ದ್ವಿಪಕ್ಷೀಯ ಸಹಕಾರ ಬಲವರ್ಧನೆಗೆ ಒತ್ತು
4. ಐಸಿಸಿ ಚಾಂಪಿಯನ್ಸ್ ಟ್ರೋಫಿ ; ಪಾಕಿಸ್ತಾನ ವಿರುದ್ಧ ಭಾರತಕ್ಕೆ ೬ ವಿಕೆಟ್‌ಗಳ ಭರ್ಜರಿ ಜಯ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೧೯ನೇ ಕಂತಿನ ಹಣವನ್ನು ಬಿಹಾರದ ಬಘಲ್‌ಪುರದಿಂದ ಬಿಡುಗಡೆ ಮಾಡಲಿದ್ದಾರೆ. ಈ ಯೋಜನೆಯಡಿ ಜಮೀನು ಹೊಂದಿರುವ ರೈತರಿಗೆ ವಾರ್ಷಿಕವಾಗಿ ಆರು ಸಾವಿರ ರೂಪಾಯಿ ನೀಡಲಾಗುತ್ತದೆ. ದೇಶಾದ್ಯಂತ ೭೩೧ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಸುಮಾರು ಎರಡೂವರೆ ಕೋಟಿ ರೈತರು ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ಪಾಲ್ಗೊಳ್ಳುವ ನಿರೀಕ್ಷೆಯಿದೆ. ಕಾರ್ಯಕ್ರಮದ ಕುರಿತು ಮಾಹಿತಿ ನೀಡಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಕಿಸಾನ್ ಸಮ್ಮಾನ್ ಸಮಾರೋಹ್ ದಿನ ಎಂದು ಆಚರಿಸಲಾಗುವುದು. ನೇರ ನಗದು ವರ್ಗಾವಣೆ ಮೂಲಕ ೨೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ನೆರವು ದೇಶಾದ್ಯಂತದ ೯.೮ ಕೋಟಿಗೂ ಅಧಿಕ ರೈತರಿಗೆ ಸಿಗಲಿದೆ. ಈವರೆಗೆ ೧೧ ಕೋಟಿಗೂ ಅಧಿಕ ರೈತ ಕುಟುಂಬಗಳಿಗೆ

೩.೪೬ ಲಕ್ಷ ಕೋಟಿ ರೂಪಾಯಿಗಳನ್ನು ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಬಘಲ್‌ಪುರದಲ್ಲಿ ಕಾರ್ಯಕ್ರಮದ ವೇಳೆ ಪ್ರಧಾನಿ ಸ್ಥಳೀಯ ರೈತರೊಂದಿಗೆ ಸಂವಾದ ನಡೆಸಲಿದ್ದು, ಈ ವೇಳೆ ಅವರು ಹಲವು ರೈತರ ಸಂಬಂಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಅವರು, ಮೋತಿಹಾರಿಯಲ್ಲಿ ಗೋಕುಲ್ ಮಿಷನ್ ಅಡಿಯಲ್ಲಿ ಸ್ಥಳೀಯ ತಳಿಗಳ ಜಾನುವಾರುಗಳ ಉತ್ಕೃಷ್ಟತಾ ಕೇಂದ್ರವನ್ನು ಉದ್ಘಾಟಿಸಲಿದ್ದಾರೆ. ಹಾಗೆಯೇ ಬಿಹಾರದ ಬರೌನಿಯಲ್ಲಿ ಹಾಲು ಸಂಸ್ಕರಣಾ ಘಟಕವನ್ನು ಸಹ ಅವರು ಲೋಕಾರ್ಪಣೆ ಮಾಡಲಿದ್ದಾರೆ. ಇದರ ಜೊತೆಗೆ ಪ್ರಧಾನಿಯವರು ನವಾಡಾ-ವಾರಿಸಲಿ ಗಂಜ್-ತಿಲಯ್ಯ ನಡುವಿನ ಉನ್ನತಿಕರಿಸಲಾದ ಹೊಸ ರೈಲು ಮಾರ್ಗವನ್ನು ಲೋಕಾರ್ಪಣೆಗೊಳಿಸಲಿದ್ದಾರೆ.

<><><><>

ಮಧ್ಯಪ್ರದೇಶ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಭೋಪಾಲದಲ್ಲಿಂದು ಜಾಗತಿಕ ಹೂಡಿಕೆದಾರರ ಶೃಂಗಸಭೆ-ಜಿಐಎಸ್‌ಗೆ ಚಾಲನೆ ನೀಡಲಿದ್ದಾರೆ. ಎರಡು ದಿನಗಳ ಶೃಂಗಸಭೆಯಲ್ಲಿ ಔಷಧ ಮತ್ತು ವೈದ್ಯಕೀಯ ಸಾಧನಗಳು, ಸಾರಿಗೆ ಮತ್ತು ಸರಕು, ಕೈಗಾರಿಕೆ, ಕೌಶಲ್ಯಾಭಿವೃದ್ಧಿ, ಪ್ರವಾಸೋದ್ಯಮ ಮತ್ತು ಎಂಎಸ್‌ಎಂಇಗಳ ಕುರಿತ ಚರ್ಚೆ ನಡೆಯಲಿದೆ. ಜಾಗತಿಕ ದಕ್ಷಿಣ ದೇಶಗಳ ಸಮ್ಮೇಳನ, ಲ್ಯಾಟಿನ್ ಅಮೆರಿಕ ಮತ್ತು ಕೆರಿಬಿಯನ್ ಮತ್ತು ಪ್ರಮುಖ ಪಾಲುದಾರ ರಾಷ್ಟ್ರಗಳಿಗೆ ವಿಶೇಷ ಅಂತರರಾಷ್ಟ್ರೀಯ ಅಧಿವೇಶನಗಳನ್ನು ಈ ಕಾರ್ಯಕ್ರಮ ಒಳಗೊಂಡಿರಲಿದೆ. ಶೃಂಗಸಭೆಯ ಭಾಗವಾಗಿ ಆಟೋ ಶೋ, ಜವಳಿ ಮತ್ತು ಫ್ಯಾಷನ್ ಎಕ್ಸ್‌ಪೋ ಮತ್ತು "ಒಂದು ಜಿಲ್ಲೆ-ಒಂದು ಉತ್ಪನ್ನ" ಗ್ರಾಮ ಸೇರಿ ಒಟ್ಟು ಮೂರು ಪ್ರಮುಖ ಕೈಗಾರಿಕಾ ಪ್ರದರ್ಶನಗಳು ನಡೆಯಲಿವೆ.

<><><><>

ದೆಹಲಿಯ ೮ನೇ ವಿಧಾನಸಭೆಯ ಮೊದಲ ಅಧಿವೇಶನ ಇಂದು ಆರಂಭವಾಗಲಿದೆ. ಅಧಿವೇಶನದ ಮೊದಲ ದಿನ ಹೊಸದಾಗಿ ಆಯ್ಕೆಯಾದ ಸದಸ್ಯರು ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಿಧಾನಸಭೆಯ ಸ್ಪೀಕರ್ ಆಯ್ಕೆಯು ಇಂದು ನಡೆಯಲಿದ್ದು, ಅಧಿವೇಶನದ ೨ನೇ ದಿನವಾದ ನಾಳೆ ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್‌ಕುಮಾರ್ ಸಕ್ಸೇನಾ ಸದನವನ್ನುದ್ದೇಶಿಸಿ ಮಾತನಾಡಲಿದ್ದಾರೆ ಹಾಗೂ ಇದೇ ವೇಳೆ ಅವರು ಕಳೆದ ಸರ್ಕಾರದ ಹಣಕಾಸು ಕಾರ್ಯಕ್ಷಮತೆ ಮತ್ತು ಕಾನೂನು ಪಾಲನೆ ಕುರಿತ ಸಿಎಜಿ ವರದಿಯನ್ನು ಬಿಡುಗಡೆಗೊಳಿಸಲಿದ್ದಾರೆ. ಈ ನಡುವೆ ವಿನಯ್ ಕುಮಾರ್ ಸಕ್ಸೇನಾ ಅವರು, ಶಾಸಕ ಅರವಿಂದರ್ ಸಿಂಗ್ ಲವ್ಲಿ ಅವರನ್ನು ಹಂಗಾಮಿ

ಸಭಾಧ್ಯಕ್ಷರಾಗಿ ನೇಮಿಸಿದ್ದಾರೆ. ಅರವಿಂದರ್ ಸಿಂಗ್ ಅವರು, ಹೊಸದಾಗಿ ಆಯ್ಕೆಯಾದ ಶಾಸಕರಿಗೆ ಪ್ರಮಾಣವಚನ ಬೋಧಿಸಲಿದ್ದಾರೆ. ಶಾಸಕಾಂಗ ಸಭೆಯ ನಂತರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ದೆಹಲಿ ಮುಖ್ಯಮಂತ್ರಿ ರೇಖಾಗುಪ್ತಾ ಸಿಎಜಿ ವರದಿ ಮಂಡನೆ ಈ ವಿಧಾನಸಭಾ ಅಧಿವೇಶನದ ಪ್ರಮುಖ ಅಂಶವಾಗಿರಲಿದೆ ಎಂದು ಹೇಳಿದ್ದಾರೆ.

ಧ್ವನಿ : ರೇಖಾಗುಪ್ತಾ (೧೫ ಸೆಕೆಂಡ್ಸ್)

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಎರಡು ದಿನಗಳ ಕಾಲ ಅಸ್ಸಾಂಗೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಭಾಗವಾಗಿ ಪ್ರಧಾನಿ, ಗುವಾಹಟಿಯಲ್ಲಿಂದು ನಡೆಯಲಿರುವ ಜುಮೋಯಿರ್ ಬಿನಾಂದಿನಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಅವರು 'ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆ'ಯನ್ನು ಉದ್ಘಾಟಿಸಲಿದ್ದಾರೆ.

ಈ ಕುರಿತು ಒಂದು ವರದಿ: (೩೭ ಸೆಕೆಂಡ್ಸ್)

ಇಂದು ಗುವಾಹಟಿಗೆ ಆಗಮಿಸಲಿರುವ ಪ್ರಧಾನಿ, ಸಂಜೆ ಸರುಸಜೈ ಕ್ರೀಡಾಂಗಣದಲ್ಲಿ ನಡೆಯಲಿರುವ ಜುಮುರ್ ನೃತ್ಯ ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ೮ ಸಾವಿರದ ೫೦೦ ಕ್ಕೂ ಹೆಚ್ಚು ಚಹಾ ಬುಡಕಟ್ಟು ಸಮುದಾಯದ ಕಲಾವಿದರು ಜುಮುರ್ ನೃತ್ಯವನ್ನು ಪ್ರದರ್ಶಿಸಲಿದ್ದಾರೆ. ಜುಮುರ್ ಕಾರ್ಯಕ್ರಮದ ನಂತರ ಪ್ರಧಾನಿ ಅಡ್ವಾಂಟೇಜ್ ಅಸ್ಸಾಂ ೨.೦ ಶೃಂಗಸಭೆಯ ಭಾಗವಾಗಿ ಆಯೋಜಿಸಲಾಗಿರುವ ಪ್ರದರ್ಶನವನ್ನು ಉದ್ಘಾಟಿಸುವ ನಿರೀಕ್ಷೆಯಿದೆ. ನಾಳೆ, ಬೆಳಿಗ್ಗೆ ಅಡ್ವಾಂಟೇಜ್ ಅಸ್ಸಾಂ ೨.೦ ಶೃಂಗಸಭೆಯ ಸಮಗ್ರ ಅಧಿವೇಶನವನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ವಿವಿಧ ಅಂತಾರಾಷ್ಟ್ರೀಯ ಸಂಸ್ಥೆಗಳು, ಜಾಗತಿಕ ನಾಯಕರು ಮತ್ತು ಹೂಡಿಕೆದಾರರು, ನೀತಿ ನಿರೂಪಕರು, ಉದ್ಯಮ ತಜ್ಞರು ಸೇರಿದಂತೆ ಇತರರು ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ.

<><><><>

ಭಾರತ-ಫ್ರಾನ್ಸ್ ರಕ್ಷಣಾ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅವರು ನಾಲ್ಕು ದಿನಗಳ ಫ್ರಾನ್ಸ್ ಭೇಟಿಗಾಗಿ ಇಂದಿನಿಂದ ಪ್ರವಾಸ ಕೈಗೊಳ್ಳಲಿದ್ದಾರೆ. ಅಲ್ಲಿ ಅವರಿಗೆ ಗೌರವ ರಕ್ಷೆ ಮೂಲಕ ಸ್ವಾಗತಿಸಲಾಗುವುದು. ನಂತರ ಅವರು, ಫ್ರಾನ್ಸ್ ಸೇನಾ ಮುಖ್ಯಸ್ಥ ಜನರಲ್ ಪಿಯರೆ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಇಂದು ಸೇನಾ

ಮುಖ್ಯಸ್ಥರು ಪ್ಯಾರಿಸ್‌ನ ಲೆಸ್ ಇನ್ವಾಲಿಡ್ಸ್‌ನಲ್ಲಿ ಫ್ರಾನ್ಸ್‌ನ ಹಿರಿಯ ಮಿಲಿಟರಿ ನಾಯಕರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ. ಭೇಟಿಯ ಭಾಗವಾಗಿ ಅವರು, ಪ್ಯಾರಿಸ್‌ನಲ್ಲಿರುವ ಪ್ರತಿಷ್ಠಿತ ಮಿಲಿಟರಿ ಶಾಲೆ ಮತ್ತು ಸಂಸ್ಥೆ ಸಂಕೀರ್ಣವಾದ ಎಕೋಲ್ ಮಿಲಿಟೇರ್‌ಗೆ ಭೇಟಿ ನೀಡಲಿದ್ದಾರೆ. ನಾಳೆ ಜನರಲ್ ದ್ವಿವೇದಿ ಮಾರ್ಸೆಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ. ಅಲ್ಲಿ ಫ್ರಾನ್ಸ್ ಸೇನೆಯ ಮೂರನೇ ವಿಭಾಗವನ್ನು ಭೇಟಿಯಾಗಲಿದ್ದು, ಈ ವೇಳೆ ೩ನೇ ವಿಭಾಗದ ಧ್ಯೇಯ ಮತ್ತು ಪಾತ್ರ, ದ್ವಿಪಕ್ಷೀಯ ಸಮರಾಭ್ಯಾಸ್ ಶಕ್ತಿ, ಭಾರತ-ಫ್ರಾನ್ಸ್ ತರಬೇತಿ ಸಹಕಾರ ಮತ್ತು ಫ್ರಾನ್ಸ್ ಸೇನಾ ಆಧುನೀಕರಣ ಕಾರ್ಯಕ್ರಮ ಸ್ಕಾರ್ಪಿಯನ್ ಕುರಿತು ಅವರು ಮಾಹಿತಿ ಪಡೆಯಲಿದ್ದಾರೆ. ಭಾರತ ಮತ್ತು ಫ್ರಾನ್ಸ್ ನಡುವಿನ ಮಿಲಿಟರಿ ಸಹಯೋಗವನ್ನು ಬಲಪಡಿಸುವುದು, ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸುವುದು ಮತ್ತು ಎರಡು ರಾಷ್ಟ್ರಗಳ ಸಶಸ್ತ್ರ ಪಡೆಗಳ ನಡುವೆ ಕಾರ್ಯತಂತ್ರದ ಪಾಲುದಾರಿಕೆಯನ್ನು ಹೆಚ್ಚಿಸುವುದು ಜನರಲ್ ದ್ವಿವೇದಿ ಅವರ ಭೇಟಿಯ ಗುರಿಯಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><><><>

ಮಹಿಳಾ ಶಾಂತಿ ಪಾಲಕರ ಪ್ರಪ್ರಥಮ ಸಮಾವೇಶ ನವದೆಹಲಿಯಲ್ಲಿ ಇಂದು ನಡೆಯಲಿದೆ. ಶಾಂತಿ ಪಾಲಿನೆಯಲ್ಲಿ ಮಹಿಳೆಯರು - ಜಾಗತಿಕ ದಕ್ಷಿಣದ ದೃಷ್ಟಿಕೋನ ಈ ಬಾರಿಯ ಧ್ಯೇಯವಾಕ್ಯವಾಗಿದೆ. ರಕ್ಷಣಾ ಸಚಿವಾಲಯ ಮತ್ತು ವಿಶ್ವಸಂಸ್ಥೆ, ಶಾಂತಿಪಾಲನಾ ಸಂಸ್ಥೆಯ ಸಹಯೋಗದಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಈ ಎರಡು ದಿನಗಳ ಸಮ್ಮೇಳನವನ್ನು ಆಯೋಜಿಸಿದೆ. ವಿಶ್ವಸಂಸ್ಥೆ ಶಾಂತಿ ಕಾರ್ಯಾಚರಣೆ ಇಲಾಖೆಯ ಅಧೀನ ಪ್ರಧಾನ ಕಾರ್ಯದರ್ಶಿ ಜೀನ್-ಪಿಯರೆ ಲ್ಯಾಕ್ರೋಯಿಕ್ಸ್ ಮತ್ತು ವಿಶ್ವಸಂಸ್ಥೆಯ ವಿಶೇಷ ಸಂಯೋಜಕ ಕ್ರಿಸ್ಟೈನ್ ಸೌಂಡರ್ಸ್ ವಿಶ್ವಸಂಸ್ಥೆಯನ್ನು ಪ್ರತಿನಿಧಿಸಲಿದ್ದಾರೆ. ಸಮ್ಮೇಳನದಲ್ಲಿ ಭಾಗವಹಿಸುವವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಲಿದ್ದಾರೆ.

<><><><>

ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭದಲ್ಲಿ, ದೇಶ-ವಿದೇಶಗಳಿಂದ ಲಕ್ಷಾಂತರ ಭಕ್ತರು ಭಾಗವಹಿಸುತ್ತಿದ್ದು, ಇಲ್ಲಿಯವರೆಗೆ ೬೨ ಕೋಟಿ ೬ ಲಕ್ಷಕ್ಕೂ ಹೆಚ್ಚು ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ನಿನ್ನೆ, ಸುಮಾರು ಒಂದು ಕೋಟಿ ೩೨ ಲಕ್ಷ ಭಕ್ತರು ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

ದೇಶಾದ್ಯಂತದಿಂದ ಸಂತರು, ಭಕ್ತರು ಮತ್ತು ಯಾತ್ರಿಕರು ಮಹಾಕುಂಭಕ್ಕೆ ಬರುತ್ತಿದ್ದಾರೆ. ಈ ನಡುವೆ ನಿನ್ನೆ ಉತ್ತರಾಖಂಡ ರಾಜ್ಯಪಾಲ ನಿವೃತ್ತ ಲೆಫ್ಟಿನೆಂಟ್ ಜನರಲ್ ಗುರ್ಮಿತ್ ಸಿಂಗ್, ಒಡಿಶಾ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಲೋಕಸಭಾ ಸಂಸದ ಮತ್ತು ಬಿಜೆಪಿ ನಾಯಕ ಸಂಬಿತ್ ಪಾತ್ರ, ಗಾಯಕ ಕೈಲಾಶ್ ಖೇರ್, ಚಲನಚಿತ್ರ ನಿರ್ಮಾಪಕ ಬೋನಿ ಕಪೂರ್ ಮತ್ತು ಶಂಕರಾಚಾರ್ಯ ಭಾರತಿ ತೀರ್ಥ ಮಹಾಸ್ವಾಮೀಜಿ ಸೇರಿದಂತೆ ಹಲವು ಗಣ್ಯರು ತ್ರಿವೇಣಿ ಸಂಗಮದಲ್ಲಿ ಅಮೃತ ಸ್ನಾನ ಮಾಡಿದ್ದಾರೆ.

<><><><>

ಸಾಮಾಜಿಕ ನ್ಯಾಯ ಕುರಿತಾದ ಎರಡು ದಿನಗಳ ಪ್ರಾದೇಶಿಕ ಸಂವಾದಕ್ಕೆ ಕೇಂದ್ರ ಕಾರ್ಮಿಕ ಸಚಿವ ಡಾ. ಮನ್ಸುಖ್ ಮಾಂಡವೀಯ ನವದೆಹಲಿಯಲ್ಲಿ ಇಂದು ಚಾಲನೆ ನೀಡಲಿದ್ದಾರೆ. ಸಾಮಾಜಿಕ ನ್ಯಾಯಕ್ಕಾಗಿ ಜಾಗತಿಕ ಒಕ್ಕೂಟ ಮತ್ತು ಅಂತಾರಾಷ್ಟ್ರೀಯ ಕಾರ್ಮಿಕ ಸಂಘಟನೆ ಸಹಯೋಗದಲ್ಲಿ ಭಾರತ ಮೊಟ್ಟ ಮೊದಲ ಪ್ರಾದೇಶಿಕ ಸಂವಾದ ಕಾರ್ಯಕ್ರವನ್ನು ಏರ್ಪಡಿಸಿದೆ.

<><><><>

ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತ ತನ್ನ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧ ೬ ವಿಕೆಟ್‌ಗಳಿಂದ ಭರ್ಜರಿ ಜಯ ದಾಖಲಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಆಯ್ದುಕೊಂಡ ಪಾಕಿಸ್ತಾನ ಭಾರತದ ನಿಯಂತ್ರಿತ ಬೌಲಿಂಗ್ ನಡುವೆ ೪೯.೪ ಓವರ್‌ಗಳಲ್ಲಿ ತನ್ನ ಎಲ್ಲ ವಿಕೆಟ್ ಕಳೆದುಕೊಂಡು ೨೪೧ ರನ್ ಗಳಿಸಲಷ್ಟೇ ಶಕ್ತವಾಯಿತು. ಭಾರತ ಪರ ಕುಲದೀಪ್ ಯಾದವ್ ೩, ಹರ್ದಿಕ್ ಪಾಂಡ್ಯ ೨, ಹರ್ಷಿತ್ ರಾಣಾ, ಅಕ್ಸರ್ ಪಟೇಲ್, ರವೀಂದ್ರ ಜಡೇಜಾ ತಲಾ ೧ ವಿಕೆಟ್ ಪಡೆದರು. ೨೪೨ ರನ್‌ಗಳ ಗುರಿ ಬೆನ್ನತ್ತಿದ ಭಾರತ ೪೨.೩ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೪೪ ರನ್ ಗಳಿಸಿ ಸೆಮಿಫೈನಲ್ ಹಂತಕ್ಕೇರಲು ತನ್ನ ಸ್ಥಾನವನ್ನು ಭದ್ರಪಡಿಸಿಕೊಂಡಿದೆ. ಭಾರತದ ಗೆಲುವಿನಲ್ಲಿ ವಿರಾಟ್ ಕೊಯ್ಲಿಯ ಅಜೇಯ ಶತಕ, ಶ್ರೇಯಸ್ ಅಯ್ಯರ್ ಅವರ ಅರ್ಧ ಶತಕ, ಶುಭಮನ್ ಗಿಲ್ ಗಳಿಸಿದ ೪೬ ರನ್ ಪ್ರಮುಖ ಪಾತ್ರ ವಹಿಸಿತು. ವಿರಾಟ್ ಕೊಯ್ಲಿ ಈ ಶತಕ ಏಕದಿನ ಮಾದರಿಯಲ್ಲಿ ಅವರ ೫೧ನೇ ಶತಕವಾಗಿದ್ದು, ಏಕದಿನ ಅಂತಾರಾಷ್ಟ್ರೀಯ ಮಾದರಿಯಲ್ಲಿ ಅತ್ಯಂತ ಕಡಿಮೆ ಅವಧಿಯಲ್ಲಿ ೧೪ ಸಾವಿರ ರನ್‌ಗಳಿಸಿದ

ಬ್ಯಾಟರ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಅವರ ಅತ್ಯುತ್ತಮ ಆಟಕ್ಕಾಗಿ ಅವರಿಗೆ ಪಂದ್ಯಶ್ರೇಷ್ಠ ಪ್ರಶಸ್ತಿ ನೀಡಲಾಯಿತು.

<><><>

ನಿನ್ನೆ ರಾತ್ರಿ ಕೋಲ್ಕತ್ತಾದ ವಿವೇಕಾನಂದ ಯುಬಾ ಭಾರತಿ ಕ್ರೀಡಾಂಗಣದಲ್ಲಿ ನಡೆದ ಇಂಡಿಯನ್ ಸೂಪರ್ ಲೀಗ್ -ಐಎಸ್‌ಎಲ್ ಫುಟ್ಬಾಲ್ ಪಂದ್ಯದಲ್ಲಿ, ಮೋಹನ್ ಬಗಾನ್ ಸೂಪರ್ ಜೈಂಟ್ ತಂಡ ಒಡಿಶಾ ಎಫ್‌ಸಿ ವಿರುದ್ಧ ೧-೦ ಅಂತರದಿಂದ ಜಯಗಳಿಸಿದೆ. ನಾಳೆ ಸಂಜೆ ಬೆಂಗಳೂರಿನ ಶ್ರೀಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ, ಬೆಂಗಳೂರು ಎಫ್‌ಸಿ, ಚೆನ್ನೈಯಿನ್ ಎಫ್‌ಸಿ ತಂಡವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>